# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 404 |
| ಮಾನ್ಯ ಸದಸ್ಯರ ಹೆಸರು | : | ಶ್ರೀಮತಿ ಉಮಾಶ್ರೀ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 18.07.2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ಆನ್‌ಲೈನ್ ಉದ್ಯೋಗ, ನಕಲಿ ಲೋನ್ ಆ್ಯಪ್ ಸೇರಿದಂತೆ ವಿದೇಶಿ ಕಂಪನಿಗಳ ಹೆಸರಿನಲ್ಲಿ ವಂಚನೆ ಮಾಡಿರುವ ಪ್ರಕರಣಗಳು ಎಷ್ಟು ಇಲ್ಲಿಯವರೆಗೆ ಎಷ್ಟು ಪ್ರಕರಣಗಳನ್ನು ಇತ್ಯರ್ಥಗೊಳಿಸಿ ತಪ್ಪಿತಸ್ಥರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗಿದೆ; | ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ಆನ್‌ಲೈನ್ ಉದ್ಯೋಗ, ನಕಲಿ ಲೋನ್ ಆ್ಯಪ್ ಸೇರಿದಂತೆ ವಿದೇಶಿ ಕಂಪನಿಗಳ ಹೆಸರಿನಲ್ಲಿ ವಂಚನೆ ಮಾಡಿರುವ ಪ್ರಕರಣಗಳ ವಿವರಗಳು ಈ ಕೆಳಕಂಡಂತಿವೆ. |

**ಆನ್‌ಲೈನ್ ಉದ್ಯೋಗ ವಂಚನೆ ಪ್ರಕರಣಗಳ ವಿವರಗಳು**

| ವರ್ಷ | ಆನ್‌ಲೈನ್ ಉದ್ಯೋಗ ವಂಚನೆ ಪ್ರಕರಣಗಳ ಸಂಖ್ಯೆ | ಆನ್‌ಲೈನ್ ಉದ್ಯೋಗ ವಂಚನೆಯ ಮೊತ್ತ (ರೂಗಳಲ್ಲಿ) | ವಂಚನೆ ಗೊಳಪಟ್ಟ ಮೊತ್ತದಲ್ಲಿ ರಿಕವರಿ ಯಾದ ಮೊತ್ತ (ರೂಗಳಲ್ಲಿ) | ಬಂಧಿಸಲ್ಪಟ್ಟವರ ಸಂಖ್ಯೆ | ದಾಖಲಾದ ಪ್ರಕರಣಗಳಲ್ಲಿ ಇತ್ಯರ್ಥ ಪಡಿಸಲಾದ ಪ್ರಕರಣಗಳ ಸಂಖ್ಯೆ |
|---|---|---|---|---|---|
| 2020 | 394 | 56782816 | 8080306 | 7 | 232 |
| 2021 | 570 | 123151236 | 22109483 | 30 | 422 |
| 2022 | 977 | 231169310 | 39519682 | 38 | 630 |
| 2023 | 4470 | 3477042709 | 467364868 | 60 | 1036 |
| 10.07.2024 ರವರೆಗೆ | 1820 | 1781890324 | 157135722 | 13 | 68 |

**ನಕಲಿ ಲೋನ್ ಆ್ಯಪ್ ಮೂಲಕ ವಂಚನೆ ಮಾಡಿರುವ ವಿವರಗಳು**

| ವರ್ಷ | ನಕಲಿ ಲೋನ್‌ಆ್ಯಪ್ ವಂಚನೆ ಪ್ರಕರಣಗಳ ಸಂಖ್ಯೆ | ನಕಲಿ ಲೋನ್ ಆ್ಯಪ್ ವಂಚನೆಯ ಮೊತ್ತ (ರೂಗಳಲ್ಲಿ) | ವಂಚನೆ ಗೊಳಪಟ್ಟ ಮೊತ್ತದಲ್ಲಿ ರಿಕವರಿಯಾದ ಮೊತ್ತ | ಬಂಧಿಸಲ್ಪಟ್ಟವರ ಸಂಖ್ಯೆ | ದಾಖಲಾದ ಪ್ರಕರಣಗಳಲ್ಲಿ ಇತ್ಯರ್ಥ ಪಡಿಸಲಾದ ಪ್ರಕರಣಗಳ ಸಂಖ್ಯೆ |
|---|---|---|---|---|---|
| 2020 | 51 | 9823231 | 2591247 | 6 | 41 |
| 2021 | 209 | 16496275 | 4487884 | 9 | 170 |
| 2022 | 411 | 138082576 | 13089606 | 33 | 158 |
| 2023 | 517 | 68875091 | 12843879 | 10 | 130 |
| 10.07.2024 ರವರೆಗೆ | 134 | 46177041 | 3259741 | 1 | 11 |

**ವಿದೇಶಿ ಕಂಪನಿಗಳ ಹೆಸರಿನಲ್ಲಿ ವಂಚನೆ ಮಾಡಿರುವ ವಿವರಗಳು**

| ವರ್ಷ | ನಕಲಿ ಲೋನ್ ಆ್ಯಪ್ ವಂಚನೆ ಪ್ರಕರಣಗಳ ಸಂಖ್ಯೆ | ನಕಲಿ ಲೋನ್ ಆ್ಯಪ್ ವಂಚನೆಯ ಮೊತ್ತ | ವಂಚನೆ ಗೊಳಪಟ್ಟ ಮೊತ್ತದಲ್ಲಿ ರಿಕವರಿಯಾದ ಮೊತ್ತ | ಬಂಧಿಸ ಲ್ಪಟ್ಟವರ ಸಂಖ್ಯೆ | ದಾಖಲಾದ ಪ್ರಕರಣ ಗಳಲ್ಲಿ ಇತ್ಯರ್ಥ ಪಡಿಸಲಾದ ಪ್ರಕರಣಗಳ ಸಂಖ್ಯೆ |
|---|---|---|---|---|---|
| 2020 | 2 | 5792000 | 30000 | 0 | 1 |
| 2021 | 1 | 1545700 | 0 | 0 | 1 |
| 2022 | 2 | 351150 | 0 | 0 | 1 |
| 2023 | 28 | 19914024 | 11847090 | 1 | 2 |
| 10.07.2024 ರವರೆಗೆ | 5 | 6903416 | 0 | 0 | 0 |

ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವರ ವಿರುದ್ಧ ಐಟಿ ಕಾಯ್ದೆ ಮತ್ತು ಐಪಿಸಿ ಹಾಗೂ ಇತರೆ ಕಾನೂನುಗಳಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ, ತನಿಖೆ ಕೈಗೊಂಡು, ಆರೋಪಿಗಳ ವಿರುದ್ಧ ನ್ಯಾಯಾಲಯದಲ್ಲಿ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸುವ ಮೂಲಕ ತಪ್ಪಿತಸ್ಥರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗಿದೆ.

ಆ) ದೇಶಾದ್ಯಾಂತ ದಾಖಲಾದ ಆನ್‌ಲೈನ್ ವಂಚನೆ ಪ್ರಕರಣಗಳಲ್ಲಿ ಶೇ.73%ಕ್ಕೂ ಹೆಚ್ಚು ಪ್ರಕರಣಗಳು ಬೆಂಗಳೂರಿನಲ್ಲೇ ದಾಖಲಾಗಿರುವುದು ನಿಜವೇ; ಇಂತಹ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು;

ಸೈಬರ್ ವಂಚನೆ ಪ್ರಕರಣಗಳಲ್ಲಿ ರಾಜ್ಯಾದ್ಯಾಂತ ದಾಖಲಾದ ಪ್ರಕರಣಗಳಿಗೆ ಹೋಲಿಸಿದ್ದಲ್ಲಿ, ಬೆಂಗಳೂರು ನಗರದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಪ್ರಕರಣಗಳು ವರದಿಯಾಗಿರುತ್ತವೆ.

ಸೈಬರ್ ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.

- ❖ ಸೈಬರ್ ವಂಚನೆಗೊಳಗಾದ ಶೋಷಿತರ ಅನುಕೂಲಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಹಾಗೂ ನಗರ ವ್ಯಾಪ್ತಿಯಲ್ಲಿ ಒಂದೊಂದು ಸೈಬರ್ ಪೊಲೀಸ್ ಠಾಣೆಗಳನ್ನು (ಸಿ.ಇ.ಎನ್ ಪೊಲೀಸ್ ಠಾಣೆ) ಸ್ಥಾಪಿಸಲಾಗಿದ್ದು, ಒಟ್ಟು 43 ಸಿ.ಇ.ಎನ್ ಪೊಲೀಸ್ ಠಾಣೆಗಳು ಕಾರ್ಯನಿರ್ವಹಿಸುತ್ತಿವೆ.
- ❖ ಸೈಬರ್ ಕ್ರೈಂ ಪೊಲೀಸ್ ಠಾಣೆಗಳಲ್ಲಿನ ಸಿಬ್ಬಂದಿಗಳಿಗೆ ಸೈಬರ್ ಅಪರಾಧಗಳ ತನಿಖಾ ಕ್ರಮಗಳ ಬಗ್ಗೆ ತರಬೇತಿಯನ್ನು ನೀಡಿ, ಸೈಬರ್ ವಂಚಕರು/ಆರೋಪಿಗಳ ವಿರುದ್ಧ ಪ್ರಕರಣಗಳನ್ನು ದಾಖಲಿಸಿಕೊಂಡು ತನಿಖೆ ನಡೆಸಿ ಕಾನೂನು ರೀತ್ಯಾ ಕ್ರಮ ಕೈಗೊಂಡು ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗುತ್ತದೆ.
- ❖ ಕೇಂದ್ರ ಸರ್ಕಾರವು ಸಾರ್ವಜನಿಕರ ಅನುಕೂಲಕ್ಕಾಗಿ National Cyber Crime Reporting Portal ಅನ್ನು ಪ್ರಾರಂಭಿಸಿದ್ದು, ಈ ಮೂಲಕ ಸಾರ್ವಜನಿಕರಿಗಾಗಿ 1930 ಹಾಗೂ 112 ಸಹಾಯವಾಣಿಗಳನ್ನು ಪ್ರಾರಂಭಿಸಲಾಗಿದ್ದು, ವಂಚನೆಗೆ ಒಳಗಾದಾಗ ಈ ಪೋರ್ಟಲ್ ಮೂಲಕ ಪ್ರಕರಣವನ್ನು ದಾಖಲಿಸಲು ಅವಕಾಶ ಕಲ್ಪಿಸಿ ಕೊಡಲಾಗಿದೆ. ಪೋರ್ಟಲ್‌ನಿಂದ ರವಾನೆಯಾದಂತಹ

| | | |
|---|---|---|
| | | ದೂರುಗಳನ್ನು CEN ಪೊಲೀಸ್ ಠಾಣೆಗಳಲ್ಲಿ ಪರಿಶೀಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.<br>❖ ಅಲ್ಲದೆ ಪ್ರತಿ ಪೊಲೀಸ್ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ,<br>❖ ಸೈಬರ್ ಕ್ರೈಂ ಅಪರಾಧಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಬಹಳಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಎಲ್ಲಾ ವರ್ಗದ ಜನಗಳಿಗೂ ಸಾಮಾಜಿಕ ಜಾಲತಾಣ ಮತ್ತು ಎಲ್ಲಾ ಮಾಧ್ಯಮಗಳಿಂದಲೂ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿದೆ.<br>❖ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ Centre for Cybercrime Investigation Training & Research (CCITR) ಘಟಕವನ್ನು ಪ್ರಾರಂಭಿಸಲಾಗಿದ್ದು, ಸದರಿ ತರಬೇತಿ ಘಟಕದಿಂದ ಸರ್ಕಾರಿ ಸಂಸ್ಥೆಗಳು, ನ್ಯಾಯಾಧೀಶರುಗಳಿಗೆ, ಕಾನೂನು ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧಗಳನ್ನು ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ತರಬೇತಿಯನ್ನು ನೀಡಲಾಗುತ್ತಿದೆ.<br>❖ ಸೈಬರ್ ಕ್ರೈಂ ಅಪರಾಧ ಮತ್ತು ತನಿಖೆಗಾಗಿ ಸಂಬಂಧಿಸಿದಂತೆ (Cyber Investigation Manual) ಸೈಬರ್ ಅಪರಾಧಗಳ ತನಿಖೆ ಕೈಪಿಡಿಯನ್ನು ರಾಜ್ಯದ ಎಲ್ಲಾ ಘಟಕಗಳಿಗೆ, ಪೊಲೀಸ್ ಠಾಣೆಗಳಿಗೆ ಮತ್ತು ಇತರೆ ಕಾನೂನು ಜಾರಿ ಸಂಸ್ಥೆಗಳಿಗೆ ಕಳುಹಿಸಿಕೊಡಲಾಗಿದ್ದು, ಅದರಂತೆ, ಎಲ್ಲಾ ರೀತಿಯ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಇ) | ಇಂತಹ ಆನ್‌ಲೈನ್ ವಂಚನೆಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗ್ರತೆ ಮೂಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | **ಈ ಬಗ್ಗೆ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.**<br>❖ ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.<br>❖ ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್ ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ.<br>❖ ಸೈಬರ್ ಜಾಗೃತಿ ಬಗ್ಗೆ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>❖ ಸಾರ್ವಜನಿಕರಲ್ಲಿ ಒ.ಟಿ.ಪಿ, ಲಿಂಕ್‌ಗಳು, ನಕಲಿ ವೆಬ್‌ಸೈಟ್‌ಗಳ ಬಗ್ಗೆ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಸೈಬರ್ ವಂಚನೆಗಳ ಬಗ್ಗೆಯೂ ಸಹ ಜಾಗೃತಿ ಮೂಡಿಸಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 26 ಪಿಸಿಕ್ಯೂ 2024

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು

> 3ows – CID.